ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/ಎಡಿಎಂಐ0/ಇಎಸ್‌ಟಿ(16)/38/2024

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001.
ದಿನಾಂಕ: 15.11.2024

ಹಿಂಬರಹ

****

ಸರ್ಕಾರದ ಆದೇಶ ಸಂಖ್ಯೆ: ಇಡಿ/88/ಡಿಟಿಇ/2024, ದಿನಾಂಕ:11.11.2024 ನ್ನು ಈ ಕೆಳಕಂಡವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

**ಜಂಟಿ ನಿರ್ದೇಶಕರು (ಆಡಳಿತ)**
**ತಾಂತ್ರಿಕ ಶಿಕ್ಷಣ ಇಲಾಖೆ**

ಇವರಿಗೆ:

ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಎಲ್ಲಾ ಅನುದಾನಿತ ಇಂಜಿನಿಯರಿಂಗ್/ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ

ಪ್ರತಿ:

ಕಡತಕ್ಕೆ.

8898948/2024

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 7ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೂ ರಾಜ್ಯ ವೇತನ ಸೌಲಭ್ಯಗಳನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಆಇ 21 ಎಸ್‌ಆರ್‌ಪಿ 2024, ದಿನಾಂಕ:22.07.2024.
2. ಸರ್ಕಾರದ ಆದೇಶ ಸಂಖ್ಯೆ:ಆಇ 21 ಎಸ್‌ಆರ್‌ಪಿ 2024, ದಿನಾಂಕ:23.08.2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ(1)ರ ಸರ್ಕಾರದ ಆದೇಶದಲ್ಲಿ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಕುರಿತು ಆದೇಶಿಸಿದ್ದು, ಸದರಿ ಆದೇಶದ ಕಂಡಿಕೆ:8ರಲ್ಲಿ "ಅನ್ವಯಿಸುವ ಬದಲಾವಣೆಯೊಂದಿಗೆ ಈ ಮೇಲಿನ ಎಲ್ಲಾ ಸೌಲಭ್ಯಗಳನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳ ನೌಕರರು ಮತ್ತು ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗಳಿಗೂ ಸಹ ವಿಸ್ತರಿಸಲು ಸರ್ಕಾರವು ಹರ್ಷಿಸುತ್ತದೆ" ಎಂದು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(2)ರ ಸರ್ಕಾರದ ಆದೇಶದಲ್ಲಿ ವೇತನ ಶ್ರೇಣಿಗಳ ಪರಿಷ್ಕರಣೆ ಮತ್ತು ಇತರ ಸಂಬಂಧಿತ ಭತ್ಯೆಗಳ ವಿಸ್ತೃತವಾದ ಆದೇಶವನ್ನು ಹೊರಡಿಸಿದ್ದು, ಸದರಿ ಆದೇಶದ ಕಂಡಿಕೆ:11.1ರಲ್ಲಿ "ಪರಿಷ್ಕೃತ ವೇತನ ಶ್ರೇಣಿಗಳ ಸೌಲಭ್ಯಗಳನ್ನು ಅನುದಾನಿತ ಸಂಸ್ಥೆಗಳ ನೌಕರರು ಹಾಗೂ ಸ್ಥಳೀಯ ಸಂಸ್ಥೆಗಳ ಮತ್ತು ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗಳಿಗೂ ಸಹ ವಿಸ್ತರಿಸಲಾಗಿರುತ್ತದೆ. ಈ ಕುರಿತಂತೆ ಆದೇಶಗಳನ್ನು ಸಂಬಂಧಪಟ್ಟ ಆಡಳಿತ ಇಲಾಖೆಗಳು ಪ್ರತ್ಯೇಕವಾಗಿ ಹೊರಡಿಸುತ್ತವೆ" ಎಂದು ಆದೇಶಿಸಲಾಗಿರುತ್ತದೆ.

PR-14/11/24

ಮೇಲ್ಕಂಡಂತೆ ಪರಿಶೀಲಿಸಿ, ತಾಂತ್ರಿಕ ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ರಾಜ್ಯ ವೇತನ ಶ್ರೇಣಿಯಲ್ಲಿರುವ ನೌಕರರಿಗೆ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿನ ಬೋಧಕೇತರ ಸಿಬ್ಬಂದಿಗಳಿಗೆ 7ನೇ ವೇತನ ಆಯೋಗದ ವೇತನ ಶ್ರೇಣಿಗಳನ್ನು ವಿಸ್ತರಿಸಲು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಇಡಿ 88 ಟಿಪಿಇ 2024</u>**
**<u>ಬೆಂಗಳೂರು, ದಿನಾಂಕ:11ನೇ ನವೆಂಬರ್ 2024</u>**

E-ST(16)

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸರ್ಕಾರದಿಂದ ಸಹಾಯಾನುದಾನ ಪಡೆಯುವ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ರಾಜ್ಯ ವೇತನ ಶ್ರೇಣಿಯಲ್ಲಿರುವ ನೌಕರರಿಗೆ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇಲ್ಲಿನ ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಆಇ 21 ಎಸ್‌ಆರ್‌ಪಿ 2024, ದಿನಾಂಕ:17.08.2024ರಲ್ಲಿ ಹೊರಡಿಸಿರುವ 'ಕರ್ನಾಟಕ ನಾಗರೀಕ ಸೇವಾ(ಪರಿಷ್ಕೃತ ವೇತನ) ನಿಯಮಗಳು 2024' ಹಾಗೂ ಸಂಬಂಧಿತ ಸರ್ಕಾರದ ಆದೇಶಗಳನ್ನು ವಿಸ್ತರಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

11/11/2024
(ಮಹಾಂತೇಶಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ತಾಂತ್ರಿಕ ಶಿಕ್ಷಣ ಇಲಾಖೆ
ನಿರ್ದೇಶಕರ ಆಪ್ತ ಶಾಖೆ
ಸಂಖ್ಯೆ: 225
ದಿನಾಂಕ: 12-11-2024

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾವಿ.
6. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಅಧ್ಯಕ್ಷರು, ಕರ್ನಾಟಕ ರಾಜ್ಯ ಅನುದಾನಿತ ಪಾಲಿಟೆಕ್ನಿಕ್ ರಾಜ್ಯ ವೇತನ ಶ್ರೇಣಿ ನೌಕರರ ಸಂಘ, ಬೆಂಗಳೂರು.
8. ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.